# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಹಣಮಂತ ರುದ್ರಪ್ಪ ನಿರಾಣಿ ರವರ ಶೂನ್ಯ ವೇಳೆಯ ಪ್ರಸ್ತಾಪಕ್ಕೆ ಉತ್ತರಿಸುವ ಬಗ್ಗೆ.

## :: ಪ್ರಸ್ತಾಪ ::

ಕರ್ನಾಟಕ ಹಾಗೂ ಮಹಾರಾಷ್ಟ್ರ ರಾಜ್ಯದ ಗಡಿ ಭಾಗದಲ್ಲಿ ಕನ್ನಡ ಸರ್ಕಾರಿ ಶಾಲೆಗಳ ವಿಧ್ಯಾರ್ಥಿಗಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗುತ್ತಿರುವ ಬಗ್ಗೆ ಆತಂಕ ವ್ಯಕ್ತಪಡಿಸಿ ದಿನಾಂಕ:06.12.2023ರ ಹೊಸದಿಗಂತ ದಿನಪತ್ರಿಕೆಯಲ್ಲಿ ವರದಿಯಾಗಿದೆ.

ಚಿಕ್ಕೋಡಿ ಹಾಗೂ ಬೆಳಗಾವಿ ಶೈಕ್ಷಣಿಕ ಜಿಲ್ಲೆಯಲ್ಲಿನ ಸರ್ಕಾರಿ ಕನ್ನಡ ಮಾದ್ಯಮ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಎದ್ದು ಕಾಣುತ್ತಿದೆ.

2019-20ರ ಜನಗಣತಿಯಂತೆ ಮಹಾರಾಷ್ಟ್ರದ ಗಡಿ ಭಾಗದಲ್ಲಿ 260ಕ್ಕೂ ಹೆಚ್ಚು ಕನ್ನಡ ಶಾಲೆಗಳಿದ್ದು 30 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ. ಈ ಶಾಲೆಗಳಲ್ಲಿ 1130 ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದು ಇನ್ನೂ 500 ಶಿಕ್ಷಕರ ಕೊರತೆ ಇದ್ದರೂ ಕೂಡಾ ಕಳೆದ 13 ವರ್ಷಗಳಿಂದ (2010 ರಿಂದ) ಮಹಾರಾಷ್ಟ್ರ ಸರ್ಕಾರ ಕನ್ನಡ ಮಾಧ್ಯಮದ ಸರ್ಕಾರಿ ಶಾಲೆಗಳಿಗೆ ಶಿಕ್ಷಕರ ನೇಮಕ ಮಾಡದೇ ಮೀನಮೇಷ ಎಣಿಸುತ್ತಿದೆ. ಹೀಗಾಗಿ ಬಹುತೇಕ ಕನ್ನಡ ಮಾಧ್ಯಮದ ವಿದ್ಯಾರ್ಥಿಗಳು ಮರಾಠಿ ಮಾಧ್ಯಮದ ಶಾಲೆಗಳತ್ತ ಮುಖ ಮಾಡುತ್ತಿರುವುದು ಖೇದಕರದ ಸಂಗತಿಯಾಗಿದೆ.

ಖಾನಾಪೂರ ತಾಲೂಕಿನಲ್ಲಿ ಕನ್ನಡ ಮಾಧ್ಯಮದ 90 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 10,115 ವಿದ್ಯಾರ್ಥಿಗಳು, 206 ಮರಾಠಿ ಮಾಧ್ಯಮದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 8942 ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ. ಈ ಅಂಕಿ ಅಂಶಗಳ ಪ್ರಕಾರ ಖಾನಾಪೂರ ತಾಲೂಕಿನಲ್ಲಿ 112 ವಿದ್ಯಾರ್ಥಿಗಳಿಗೆ ಒಂದರಂತೆ ಕನ್ನಡ ಮಾದ್ಯಮದ ಶಾಲೆಗಳಿವೆ ಹಾಗೂ 43 ವಿಧ್ಯಾರ್ಥಿಗಳಂತೆ ಮರಾಠಿ ಶಾಲೆಗಳಿವೆ.

ಹೀಗೆ ಕನ್ನಡ ಮಾದ್ಯಮದ ಸರ್ಕಾರಿ ಶಾಲೆಗಳಿಗೆ ರಾಜ್ಯದ ಒಳಗೂ ಹಾಗೂ ಹೊರಗೂ ಅನ್ಯಾಯವಾಗುತ್ತಿರುವುದನ್ನು ನೋವಿನ ಸಂಗತಿಯಾಗಿದೆ ಹಾಗೂ ಸರ್ಕಾರವು ಈ ಪರಿಸ್ಥಿತಿಯನ್ನು ಗಂಬೀರವಾಗಿ ಗಮನಿಸಬೇಕಾಗಿದೆ.

ಮಹಾರಾಷ್ಟ್ರದ ಸಾಂಗ್ಲಿ, ಸೋಲಾಪೂರ, ಬೆಳಗಾವಿ ಜಿಲ್ಲೆಯ ಕನ್ನಡ ಮಾದ್ಯಮದ ಸರ್ಕಾರಿ ಶಾಲೆಗಳಿಗೆ ಸರ್ಕಾರಿ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು ಹಾಗೂ ಮರಾಠಿ ಭಾಷಿಕರಿಗೆ ಮಾತೃ ಭಾಷೆಯಲ್ಲಿ ಶಿಕ್ಷಣ ನೀಡಲು ಎರಡು ರಾಜ್ಯಗಳ ಅಧಿಕಾರಿಗಳ ಸಭೆ ಕರೆದು ಆಯಾ ಭಾಷಿಕರಿಗೆ ತಾತ್ವಿಕ ನೆಲೆ ಕಲ್ಪಿಸುವುದರೊಂದಿಗೆ ಕನ್ನಡ ಶಾಲೆ ಉಳಿಸಲು ಇಚ್ಛಾಶಕ್ತಿ ತೋರಬೇಕೆಂದು ಮಾನ್ಯ ಶಿಕ್ಷಣ ಸಚಿವರ ಮೂಲಕ ಸರ್ಕಾರವನ್ನು ಒತ್ತಾಯಿಸುತ್ತೇನೆ.

## :: ಉತ್ತರ ::

ಕರ್ನಾಟಕ ಹಾಗೂ ಮಾಹಾರಾಷ್ಠ್ರ ರಾಜ್ಯದ ಗಡಿ ಭಾಗದಲ್ಲಿ ಕನ್ನಡ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳ ಸಂಖ್ಯೆ ಗಣನೀಯವಾಗಿ ಕಡಿಮೆ ಆಗುತ್ತಿರುವುದ್ದು ಸರ್ಕಾರದ ಗಮನಕ್ಕೆ ಬಂದಿದೆ.

ಬೆಳಗಾವಿ ಶೈಕ್ಷಣಿಕ ಜಿಲ್ಲೆಗೆ ಸಂಬಂಧಿಸಿದಂತೆ ಗಡಿ ಭಾಗಕ್ಕೆ ಹೊಂದಿಕೊಂಡಂತಹ 669 ಪ್ರಾಥಮಿಕ ಶಾಲೆಗಳು ಹಾಗೂ 43 ಪ್ರೌಢ ಶಾಲೆಗಳಿಗೆ ಕನ್ನಡ ಶಾಲೆಗಳ ಮೂಲಭೂತ ಸೌಕರ್ಯಗಳು ಇರುತ್ತವೆ. ಕೊರತೆ ಇರುವ ಶಾಲೆಗಳಿಗೆ ಸರ್ಕಾರದ ವಿವಿಧ ಯೋಜನೆಗಳಡಿ ಅನುದಾನ ಒದಗಿಸಿ ಮೂಲಸೌಕರ್ಯಗಳನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ.

26



ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗ ಸಂಬಂಧಿಸಿದಂತೆ ಗಡಿ ಭಾಗಕ್ಕೆ ಹೊಂದಿಕೊಂಡಂತೆ ಮೂಲ ಸೌಕರ್ಯಗಳು ಕೊರತೆ ಇರುವ ಶಾಲೆಗಳಿಗೆ ವಿವಿಧ ಯೋಜನೆಗಳಲ್ಲಿ ಸೌಕರ್ಯಗಳನ್ನು ಒದಗಿಸಲಾಗುತ್ತಿದ್ದೆ.

2022-23ನೇ ಸಾಲಿನ ವಿವೇಕ ಯೋಜನೆಯಡಿ ಒಟ್ಟು 301 ಹೊಸ ಕೊಠಡಿಗಳ ನಿರ್ಮಾಣಕ್ಕಾಗಿ ರೂ.4115.7 ಲಕ್ಷ ಮಂಜೂರಾಗಿ ಇಲ್ಲಿಯವರೆಗೆ ರೂ.2778.86ಲಕ್ಷ ಬಿಡುಗಡೆಯಾಗಿದೆ. 2022-23ನೇ ಸಾಲಿನ ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ದುರಸ್ಥಿಗಾಗಿ ತಲಾ ರೂ.30.00ಲಕ್ಷ (ಯಮಕನಮರಡಿ ವಿಧಾನಸಭಾ ಕ್ಷೇತ್ರಕ್ಕೆ ಮಾತ್ರ ರೂ.15.00ಲಕ್ಷ) ದಂತೆ ಒಟ್ಟು 83 ಸರ್ಕಾರಿ ಶಾಲೆಗಳ 234 ಕೊಠಡಿಗಳ ದುರಸ್ಥಿಗಾಗಿ ರೂ.285.00ಲಕ್ಷ ಅನುದಾನ ಬಿಡುಗಡೆಯಾಗಿದೆ.

2019-20ರ ಜನಗಣತಿಯಂತೆ ಮಹಾರಾಷ್ಟ್ರದ ಗಡಿ ಭಾಗದಲ್ಲಿ 260ಕ್ಕೂ ಹೆಚ್ಚು ಕನ್ನಡ ಶಾಲೆಗಳಿದ್ದು 30 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ. ಈ ಶಾಲೆಗಳಲ್ಲಿ 1130 ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದು ಇನ್ನೂ 500 ಶಿಕ್ಷಕರ ಕೊರತೆ ಇದ್ದರೂ ಕೂಡಾ ಕಳೆದ 13 ವರ್ಷಗಳಿಂದ (2010 ರಿಂದ) ಮಹಾರಾಷ್ಟ್ರ ಸರ್ಕಾರ ಕನ್ನಡ ಮಾಧ್ಯಮದ ಸರ್ಕಾರಿ ಶಾಲೆಗಳಿಗೆ ಶಿಕ್ಷಕರ ನೇಮಕ ಮಾಡದೇ ಮೀನಮೇಷ ಎಣಿಸುತ್ತಿರುವ ವಿಷಯದ ಬಗ್ಗೆ ಹಾಗೂ ಮಹಾರಾಷ್ಟ್ರದ ಸಾಂಗ್ಲಿ, ಸೊಲ್ಲಾಪುರ ಭಾಗದಲ್ಲಿರುವ ಕನ್ನಡ ಮಾಧ್ಯಮ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಕರ್ಯಗಳನ್ನು ಸಮರ್ಪಕವಾಗಿ ಒದಗಿಸುವಂತೆ , ಮಹಾರಾಷ್ಟ್ರ ಸರ್ಕಾರದೊಂದಿಗೆ ವ್ಯವಹರಿಸಲಾಗುವುದು.

ಮುಂದುವರೆದು, ಕರ್ನಾಟಕ ರಾಜ್ಯದ ಗಡಿ ಭಾಗದ ಒಳಗೆ ಬರುವ ಎಲ್ಲಾ ಕನ್ನಡ ಶಾಲೆಗಳಿಗೆ ಅಗತ್ಯ ಮೂಲ ಸೌಕರ್ಯಗಳಾದ ಹೊಸ ಕೊಠಡಿಗಳು, ಶೌಚಾಲಯ, ಕುಡಿಯುವ ನೀರು, ಆಟದ ಮೈದಾನ, ಆವರಣ ಗೋಡೆ ರಿಪೇರಿ & ನಿರ್ಮಾಣ ಇತ್ಯಾದಿ ಅಗತ್ಯ ಮೂಲ ಸೌಕರ್ಯಗಳನ್ನು ಒದಗಿಸಲಾಗಿರುತ್ತದೆ. ಕನ್ನಡ ಶಿಕ್ಷಕರ ಖಾಲಿ ಹುದ್ದೆಗಳು ಇದ್ದಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಅತಿಥಿ ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲಾಗಿದೆ. 2022-23ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇದ್ದ 15000 ಪದವೀಧರ ಪ್ರಾಥಮಿಕ ಶಿಕ್ಷಕರ (6 ರಿಂದ 8 ನೇ ತರಗತಿ) ಹುದ್ದೆಗಳ ನೇಮಕಾತಿಕಾಗಿ ಅಧಿಸೂಚಿಸಲಾಗಿದ್ದು, ಈ ಹುದ್ದೆಗಳಿಗೆ ಎದುರಾಗಿ ಒಟ್ಟು 13352 ಅರ್ಹ ಅಭ್ಯರ್ಥಿಗಳು ಆಯ್ಕೆಯಾಗಿದ್ದು, ಇದರಲ್ಲಿ ಕನ್ನಡ ಭಾಷಾ ಶಿಕ್ಷಕರೂ ಸಹ ಆಯ್ಕೆಯಾಗಿರುತ್ತಾರೆ.

ಮೇಲ್ಕಂಡಂತೆ ಕನ್ನಡ ಶಾಲೆಗಳ ಹಿತವನ್ನು ಕಾಪಾಡಲು ಸರ್ಕಾರವು ಬದ್ದವಾಗಿದೆ.

**ಸಂಖ್ಯೆ: ಇಪಿ 69 ಪಿಎಂಎ 2023.**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಸಚಿವರು**